ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	226(398)
2) ಸದಸ್ಯರ ಹೆಸರು	:	ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3) ಉತ್ತರಿಸುವ ದಿನಾಂಕ	:	17.07.2019
4) ಉತ್ತರಿಸುವವರು	:	ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
(ಅ)	ರಾಜ್ಯದ ಕೆಲವೆಡೆ ಅರಣ್ಯ ವ್ಯಾಪ್ತಿಯಲ್ಲಿ ವಾಸಿಸುವ ನಿವಾಸಿಗಳು ತಮ್ಮ ಸ್ವಾರ್ಥಕ್ಕಾಗಿ, ವೈಯಕ್ತಿಕ ದ್ವೇಷ, ಜಾಗದ ವೈಷಮ್ಯಕ್ಕಾಗಿ ಬೆಂಕಿ ಹಚ್ಚುತ್ತಿರುವ ಕೆಲವು ಘಟನೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;	ಪ್ರಸ್ತುತ ಸಾಲಿನಲ್ಲಿ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಅರಣ್ಯ ಪ್ರದೇಶಕ್ಕೆ ಬೆಂಕಿ ಹಚ್ಚಿದ 03 ಪ್ರಕರಣಗಳಲ್ಲಿ 03 ಜನ ಅನುಮಾನಾಸ್ಪದ ವ್ಯಕ್ತಿಗಳನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿರುತ್ತದೆ.
(ಆ)	ಅರಣ್ಯ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಕೆಲವು ಅಗ್ನಿಶಾಮಕ ಠಾಣೆಗಳಲ್ಲಿ ಸಿಬ್ಬಂದಿ ಕೊರತೆಯನ್ನು ಎದುರಿಸುತ್ತಿದ್ದು, ಇದನ್ನು ಸರಿದೂಗಿಸಲು ಕೆಲವೆಡೆ ಹೋಮ್ ಗಾರ್ಡ್‌ಗಳನ್ನು ನಿಯೋಜಿಸಲಾಗಿದೆಯೇ; ಈ ಹೋಮ್‌ಗಾರ್ಡ್ ಸಿಬ್ಬಂದಿಗಳು ಅರಣ್ಯದಲ್ಲಿ ಬೆಂಕಿ ನಂದಿಸುವ ಪರಿಣಿತ ತರಬೇತಿಯನ್ನು ಹೊಂದಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸಿಬ್ಬಂದಿ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;	2017-18ನೇ ಸಾಲಿನಿಂದ ಬೇಸಿಗೆ ಕಾಲದಲ್ಲಿ ಬೆಂಕಿ ರಕ್ಷಣಾ ಕಾರ್ಯ ನಿರ್ವಹಿಸಲು ಕೆಲವು ರಕ್ಷಿತ ಅರಣ್ಯ ಪ್ರದೇಶಗಳಲ್ಲಿ ಅಗ್ನಿಶಾಮಕ ಇಲಾಖೆಯ ಸಿಬ್ಬಂಧಿ, ಅಗ್ನಿಶಾಮಕ ವಾಹನಗಳನ್ನು ನಿಯೋಜಿಸಿ ಬೆಂಕಿ ನಿಯಂತ್ರಿಸುವ ಉಪಕರಣಗಳನ್ನು ಬಳಸಿಕೊಂಡು ಕಾಡ್ಗಿಚ್ಚು ನಿಯಂತ್ರಣ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ. ರಕ್ಷಿತಾರಣ್ಯಗಳಲ್ಲಿ ಬೆಂಕಿ ರಕ್ಷಣಾ ಕಾರ್ಯ ನಿರ್ವಹಿಸಲು ಹೋಮ್‌ಗಾರ್ಡ್‌ಗಳನ್ನು ನಿಯೋಜಿಸಿರುವುದಿಲ್ಲ. ಬೇಸಿಗೆ ಕಾಲದಲ್ಲಿ ಬೆಂಕಿ ರಕ್ಷಣಾಕಾರ್ಯ ನಿರ್ವಹಿಸಲು ಸ್ಥಳೀಯ ಗಿರಿಜನರುಗಳಿಗೆ ತರಬೇತಿ ನೀಡಿ ಬೆಂಕಿ ವಾಚರ್‌ಗಳಾಗಿ ನೇಮಕ ಮಾಡಿಕೊಳ್ಳಲಾಗುತ್ತದೆ. ಅಲ್ಲದೇ ಇಲಾಖಾ ವಾಹನಗಳು ಹಾಗೂ ಎಲ್ಲಾ ರಕ್ಷಣಾ ಸಿಬ್ಬಂದಿಗಳನ್ನು ಬೆಂಕಿ ರಕ್ಷಣೆ ಕೆಲಸಗಳಿಗಾಗಿ ಪೂರ್ಣ ಪ್ರಮಾಣದಲ್ಲಿ ನಿಯೋಜಿಸಿಕೊಳ್ಳಲಾಗುತ್ತದೆ.
ಇ)	ಕಳೆದ ಫೆಬ್ರವರಿಯಲ್ಲಿ ಬಂಡೀಪುರ ಹುಲಿ ಸಂರಕ್ಷಿತಾರಣ್ಯದಲ್ಲಿ ಬೆಂಕಿ ಕಾಣಿಸಿಕೊಂಡು ಕಾಡ್ಗಿಚ್ಚಿನಂತೆ ಹರಡಿ ಸುಮಾರು 20.000ಕ್ಕೂ ಹೆಚ್ಚು ಎಕರೆ ಅರಣ್ಯ ಪ್ರದೇಶ ಬೆಂಕಿಗಾಹುತಿಯಾಗಿದ್ದು, ಈ ದುರಂತಗಳನ್ನು ತಪ್ಪಿಸಲು ಅರಣ್ಯ ಇಲಾಖೆಯ ಸಿಬ್ಬಂದಿಯ	ಫೆಬ್ರವರಿ 2019ರ ತಿಂಗಳಲ್ಲಿ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಉಂಟಾದ ಕಾಡ್ಗಿಚ್ಚಿನಿಂದ ಒಟ್ಟು 3160 ಹೆಕ್ಟೇರ್ (7742 ಎಕರೆ) ಯಷ್ಟು ಅರಣ್ಯ ಪ್ರದೇಶ ಬೆಂಕಿ ಪ್ರಭಾವಕ್ಕೆ ಒಳಪಟ್ಟಿರುತ್ತದೆ. ಬಂಡೀಪುರ ಅರಣ್ಯ ಪ್ರದೇಶದಲ್ಲಿ ಬೆಂಕಿ ಅವಘಡ ತಪ್ಪಿಸಲು ಈ ಕೆಳಕಂಡ ವೈಜ್ಞಾನಿಕ ಕ್ರಮಗಳನ್ನು ಈಗಾಗಲೇ ಅನುಸರಿಸಲಾಗುತ್ತಿದ್ದು, ಮುಂದಿನ ವರ್ಷಗಳಲ್ಲಿ ಇನ್ನೂ ಹೆಚ್ಚಿನ

	ಸಾಂಪ್ರದಾಯಿಕ ಬೆಂಕಿ ನಂದಿಸುವ ವಿಧಾನದಿಂದ ಹೊಸ ವೈಜ್ಞಾನಿಕ ವಿಧಾನಗಳನ್ನು ಅಳವಡಿಸಿಕೊಳ್ಳಲು ಸರ್ಕಾರವು ಚಿಂತಿಸಿದೆಯೇ; ಹಾಗಿದ್ದಲ್ಲಿ, ಯಾವ ಯಾವ ಯೋಜನೆಗಳನ್ನು ರೂಪಿಸುತ್ತಿದೆ; (ಸಂಪೂರ್ಣ ವಿವರಗಳನ್ನು ನೀಡುವುದು)	ಪ್ರಮಾಣದಲ್ಲಿ ಕ್ರಮಗಳನ್ನು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿರುತ್ತದೆ. 1. ಬೇಸಿಗೆ ಕಾಲದಲ್ಲಿ ಬೆಂಕಿ ರಕ್ಷಣಾ ಕಾರ್ಯ ನಿರ್ವಹಿಸಲು ರಕ್ಷಿತ ಅರಣ್ಯ ಪ್ರದೇಶಗಳಲ್ಲಿ ಅಗ್ನಿಶಾಮಕ ಇಲಾಖೆಯ ಸಿಬ್ಬಂದಿ, ಅಗ್ನಿಶಾಮಕ ವಾಹನಗಳನ್ನು ನಿಯೋಜಿಸಿ ಬೆಂಕಿ ನಿಯಂತ್ರಿಸುವ ಉಪಕರಣಗಳನ್ನು ಬಳಸಿಕೊಂಡು ಕಾಡ್ಗಿಚ್ಚು ನಿಯಂತ್ರಣ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ. 2. ಬೇಸಿಗೆ ಕಾಲ ಪ್ರಾರಂಭವಾಗುವ ಮುನ್ನವೇ ಬೆಂಕಿ ಬೀಳುವ ಪ್ರದೇಶಗಳಲ್ಲಿ (Fire Prone Area) ಮುನ್ನೆಚ್ಚರಿಕೆ ಕ್ರಮ ಕೈಗೊಂಡು ಹಾಲಿ ಇರುವ ಫೈರ್‌ಲೈನ್‌ಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ನಿರ್ವಹಣೆ ಮಾಡಲಾಗುತ್ತಿದೆ. 3. ಸ್ಥಳೀಯ ಗಿರಿಜನರುಗಳನ್ನು ಬೆಂಕಿ ವಾಚರ್‌ಗಳಾಗಿ ನೇಮಕ ಮಾಡಿಕೊಂಡು ತರಬೇತಿ ನೀಡಿ ಅಗತ್ಯ ಉಪಕರಣಗಳನ್ನು ಒದಗಿಸಿ ಬೆಂಕಿ ನಿಯಂತ್ರಿಸಲು ಕ್ರಮಕೈಗೊಳ್ಳಲಾಗುತ್ತಿದೆ. 4. ಬೇಸಿಗೆಯ ಬೆಂಕಿ ಕಾಲದಲ್ಲಿ ಖಾಸಗಿ ವಾಹನಗಳನ್ನು ಹೆಚ್ಚುವರಿಯಾಗಿ ನೀರಿನ ಟ್ಯಾಂಕರ್ ಸಮೇತ ಬಾಡಿಗೆಗೆ ಪಡೆದುಕೊಳ್ಳಲಾಗುತ್ತಿದೆ. 5. ಡ್ರೋನ್ ಕ್ಯಾಮರಾಗಳ ಸೇವೆಯನ್ನು ಅರಣ್ಯ ಪ್ರದೇಶದ ಗಡಿರೇಖೆಯಲ್ಲಿ ಉಪಯೋಗಿಸಲಾಗುತ್ತಿದೆ. 6. ತುರ್ತು ಸಂದರ್ಭಗಳನ್ನು ನಿಭಾಯಿಸುವುದಕ್ಕಾಗಿ ಹೆಲಿಕ್ಯಾಪ್ಟರ್‌ಗಳ ಸೇವೆಯನ್ನು ಪಡೆದುಕೊಳ್ಳಲಾಗುತ್ತಿದೆ. 7. ಪ್ರಮಾಣಿತ ಮಟ್ಟದ ಕಾರ್ಯವಿಧಾನ (Standard Operating Procedure) ರೂಪಿಸಲಾಗಿದ್ದು, ಇದರನ್ವಯ ಕಾಲಕಾಲಕ್ಕೆ ಬೆಂಕಿ ರಕ್ಷಣಾ ಕೆಲಸಗಳನ್ನು ಕೈಗೊಳ್ಳಲಾಗುತ್ತದೆ. 8. ಹವಾಮಾನದ ದತ್ತಾಂಶದ ಆಧಾರದ ಮೇಲೆ ಅರಣ್ಯಕ್ಕೆ ಬೆಂಕಿ ಬೀಳುವ ಸಾಧ್ಯತೆ ಬಗ್ಗೆ ಭಾರತದ ಸರ್ವೇಕ್ಷಣಾಲಯ (Forest Survey of India) ನವದೆಹಲಿ ಇವರು ಮಾಹಿತಿ/ಎಚ್ಚರಿಕೆ ಸಂದೇಶಗಳನ್ನು ನೀಡುತ್ತಿದ್ದು, ಇದನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳ ಹಂತದ ಸಿಬ್ಬಂದಿಯವರೆಗೂ ಎಸ್‌ಎಂಎಸ್ ಮುಖಾಂತರ ತಲುಪಿಸಲಾಗುತ್ತಿದೆ. 9. ಆಧುನಿಕ ಬೆಂಕಿ ನಂದಿಸುವ ಉಪಕರಣಗಳನ್ನು ಹಾಗೂ ಬೆಂಕಿ ಕಾವಲುಗಾರರಿಗೆ ಬೆಂಕಿ ನಿರೋಧಕ ಜಾಕೆಟ್‌ಗಳಂತಹ ಸಂರಕ್ಷಣಾ ಸಲಕರಣೆಗಳನ್ನು ಒದಗಿಸಲಾಗುತ್ತದೆ.

ಈ)	ಟಿಂಬರ್ ಮಾಫಿಯಾದವರು ರಾತ್ರಿ ಹೊತ್ತು ಚೆಕ್ ಪೋಸ್ಟ್‌ನಲ್ಲಿರುವ ಪೋಲೀಸರಿಗೆ ಮತ್ತು ಅರಣ್ಯ ಅಧಿಕಾರಿಗಳು ಮತ್ತು ಅರಣ್ಯ ಸಿಬ್ಬಂದಿ ಅಕ್ರಮಗಳಿಗೆ ಕೈ ಜೋಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಟಿಂಬರ್ ಮಾಫಿಯಾವನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಇಂತಹ ಯಾವುದೇ ಪ್ರಕರಣಗಳು ಗಮನಕ್ಕೆ ಬಂದಿರುವುದಿಲ್ಲ.

ಸಂಖ್ಯೆ: ಅಪಜೀ 23 ಎಫ್‌ಟಿಎಸ್ 2019

(ಸತೀಶ್ ಎಲ್. ಜಾರಕಿಹೊಳಿ)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು